MARCH 13, 2025

**AKASHAVANI - DHARWAD**

**PRADESH SAMACHARA (KANNADA) 07.05 A.M.**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವರು: ಹರ್ಷವರ್ಧನ ಶೀಲವಂತ**

<><><>

**ಮುಖ್ಯಾಂಶಗಳು**

<><><>

- **ಖಾತ್ರಿ ಯೋಜನೆಯ ಅನುಷ್ಠಾನ ಸಮಿತಿಗಳಿಂದ, ಶಾಸಕರ ಘನತೆಗೆ ಕುಂದಿಲ್ಲ – ಮುಖ್ಯಮಂತ್ರಿ ಸಿದ್ದರಾಮಯ್ಯ.**
- **ಮಹಾತ್ಮ ಗಾಂಧಿ, ನರೇಗಾ ಯೋಜನೆ; 'ಮಹಿಳಾ ಕಾಯಕ ಬಂಧು'ವಿಗಾಗಿ, 'ಸ್ತ್ರೀ ಚೇತನ ಅಭಿಯಾನ' ಆರಂಭ.**
- **ರಾಜ್ಯದಲ್ಲಿ ಅಕ್ವಾ ಪಾರ್ಕ್‌ಗಳ ನಿರ್ಮಾಣಕ್ಕೆ, ಕ್ರಮ – ಸಚಿವ, ಮಂಕಾಳ ವೈದ್ಯ.**
- **2 ಕೋಟಿ 20 ಲಕ್ಷ ಜನ, ಪಡಿತರ ಚೀಟಿಯ ಪ್ರಯೋಜನ ಪಡೆಯುತ್ತಿಲ್ಲ – ಕೇಂದ್ರ ಸಚಿವ ಪ್ರಲ್ಹಾದ ಜೋಶಿ.**

<><><>

**ಈಗ ವಾರ್ತೆಗಳ ವಿವರ**

<><><>

**ಗ್ಯಾರಂಟಿ ಅನುಷ್ಠಾನ ಸಮಿತಿಗಳಿಂದ, ಶಾಸಕರ ಘನತೆಗೆ ಕುಂದಿಲ್ಲ; ಈ ಕುರಿತು ಜಿಲ್ಲಾಧಿಕಾರಿಗಳಿಗೆ ಸೂಚಿಸಿದ್ದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ವಿಪಕ್ಷ ನಾಯಕರ ಆರೋಪಕ್ಕೆ, ಬೆಂಗಳೂರಿನಲ್ಲಿ ಪ್ರತಿಕ್ರಿಯಿಸಿದ ಅವರು, ಅಧಿವೇಶನ ಅನಿರ್ದಿಷ್ಟಾವಧಿ ಮುಂದೂಡಿಕೆಯಾಗುತ್ತಿದ್ದಂತೆ, ಸಭೆ ಕರೆದು ತಕರಾರು ಪರಿಹರಿಸುವುದಾಗಿ, ತಿಳಿಸಿದರು.**

<><><>

**ರಾಜ್ಯ ಸರ್ಕಾರ, ಪಂಚ ಖಾತ್ರಿ ಯೋಜನೆಗಳ ಅನುಷ್ಠಾನಕ್ಕಾಗಿ, ಸಮಿತಿ ರಚಿಸಿ, ರಾಜ್ಯದ ತೆರಿಗೆದಾರರ ಹಣವನ್ನು, ದುರುಪಯೋಗ ಮಾಡುತ್ತಿದೆ ಎಂದು ಆರೋಪಿಸಿ, ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ, ಬಿ.ಜೆ.ಪಿ. ಮತ್ತು ಜೆ.ಡಿ.ಎಸ್. ಶಾಸಕರು, ವಿಧಾನಸೌಧದ ಕೆಂಗಲ್ ಹನುಮಂತಯ್ಯ ಪ್ರತಿಮೆ ಬಳಿ, ಪ್ರತಿಭಟನೆ ನಡೆಸಿದರು. ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಮೇಲ್ವಿಚಾರಣಾ ಸಮಿತಿ ರದ್ದು ಪಡಿಸುವಂತೆ, ರಾಜಭವನಕ್ಕೆ ತೆರಳಿ, ರಾಜ್ಯಪಾಲರಿಗೆ ದೂರು ನೀಡಿದರು.**

<><><>

ಖಾತ್ರಿ ಯೋಜನೆಗಳ ಅನುಷ್ಠಾನಕ್ಕೆ ರಚಿಸಲಾಗಿರುವ, ಕಾಂಗ್ರೆಸ್ ಕಾರ್ಯಕರ್ತರ ಸಮಿತಿಗಳನ್ನು ರದ್ದು ಪಡಿಸಿ, ಶಾಸಕರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸುವಂತೆ, ಪ್ರತಿಪಕ್ಷ ಬಿ.ಜೆ.ಪಿ. ಮತ್ತು ಜೆ.ಡಿ.ಎಸ್. ಸದಸ್ಯರು ವಿಧಾನಸಭೆಯಲ್ಲಿ ಧರಣಿ ಮುಂದುವರೆಸಿದ್ದರಿಂದ, ಸದನ ಕಲಾಪವನ್ನು ಮಧ್ಯಾಹ್ನದ ವರೆಗೆ ಮುಂದೂಡಲಾಗಿತ್ತು.

<><><>

ಇಂಧನ ಬೆಲೆ ಏರಿಕೆ, ಸಿಬ್ಬಂದಿ ವೇತನ ಹಾಗೂ ವಾಹನ ಬಿಡಿ ಭಾಗಗಳ ಬೆಲೆ ಹೆಚ್ಚಳದಿಂದ ಉಂಟಾದ, ಆರ್ಥಿಕ ಹೊರೆ ತಗ್ಗಿಸಲು, ಕಳೆದ ಜನವರಿಯಲ್ಲಿ ಬಸ್ ಪ್ರಯಾಣ ದರವನ್ನು, ಶೇಕಡ 15 ರಷ್ಟು ಹೆಚ್ಚಿಸಲಾಗಿದೆ ಎಂದು, ಸಾರಿಗೆ ಖಾತೆ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ. ವಿಧಾನ ಪರಿಷತ್ತಿನ ಪ್ರಶ್ನೋತ್ತರ ಅವಧಿಯಲ್ಲಿ, ಬಿಜೆಪಿ ಶಾಸಕ ಕೇಶವಪ್ರಸಾದ್ ಅವರ ಪ್ರಶ್ನೆಗೆ ಸಚಿವರು, ಉತ್ತರಿಸಿದರು.

ರಾಜ್ಯ ಸಾರಿಗೆ ಸಂಸ್ಥೆ ಅಧೀನದ, ನಾಲ್ಕು ಸಾರಿಗೆ ನಿಗಮಗಳು, 5 ಸಾವಿರದ 200 ಕೋಟಿ ರೂಪಾಯಿ ನಷ್ಟದಲ್ಲಿವೆ. ನಿಗಮಗಳ ಪುನಃಶ್ಚೇತನಕ್ಕೆ ವಿವಿಧ ಯೋಜನೆಗಳನ್ನು ರೂಪಿಸಲಾಗಿದೆ ಎಂದು, ಸಮರ್ಥಿಸಿಕೊಂಡರು.

<><><>

ಮಹಾತ್ಮ ಗಾಂಧಿ, ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿ, ಮಹಿಳಾ ಕೂಲಿಕಾರರ ಭಾಗವಹಿಸುವಿಕೆಯನ್ನು, ಶೇಕಡ 10 ರ ್ಟು ಹೆಚ್ಚಿಸಲು, ರಾಜ್ಯದ ಎಲ್ಲ ಗ್ರಾಮ ಪಂಚಾಯಿತಿಗಳಲ್ಲಿ, ಮುಂದಿನ 3 ತಿಂಗಳ ವರೆಗೆ 'ಸ್ತ್ರೀ ಚೇತನ ಅಭಿಯಾನ' ಆಯೋಜಿಸಲಾಗಿದೆ.  ನರೇಗಾ ಯೋಜನೆ ಅಡಿ, 'ಮಹಿಳಾ ಕಾಯಕ ಬಂಧು'ವಿಗೆ, ಪ್ರೋತ್ಸಾಹ ಧನ ಕಡ್ಡಾಯವಾಗಿ ಪಾವತಿಸುವ ಉದ್ದೇಶ, ವಯಕ್ತಿಕ ಕಾಮಗಾರಿಗಳ ಅರಿವು, ಫಲಾನುಭವಿಗಳಿಗೆ ಆದೇಶ ಪ್ರದಾನ, ರಂಗೋಲಿ ಸ್ಪರ್ಧೆ, ಮಹಿಳಾ ಕೂಲಿ ಕಾರ್ಮಿಕರಿಗೆ ಗ್ರಾಮೀಣ ಕ್ರೀಡಾಕೂಟ, ಅರೋಗ್ಯ ತಪಾಸಣಾ ಶಿಬಿರ.. ಮುಂತಾದ ಜಾಗೃತಿ ಕಾರ್ಯಕ್ರಮಗಳಿಂದ, ಮಹಿಳಾ ಕೂಲಿಕಾರರ ಭಾಗವಹಿಸುವಿಕೆ ಹೆಚ್ಚಿಸುವುದು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ ಗುರಿಯಾಗಿದೆ.

<><><>

ರಾಜ್ಯದಲ್ಲಿ 40 ಸಾವಿರ ಹೆಕ್ಟರ್ ಪ್ರದೇಶದಲ್ಲಿ, ಪುಷ್ಪ ಕೃಷಿ ನಡೆಯುತ್ತಿದೆ. ಪುಷ್ಪ ಮಾರಾಟ ಮತ್ತು ರಫ್ತು ಉತ್ತೇಜಿಸಲು, ಬೆಂಗಳೂರಿನಲ್ಲಿ ಸುಸಜ್ಜಿತವಾದ ಅಂತಾರಾಷ್ಟ್ರೀಯ ಮಟ್ಟದ, ವಾಣಿಜ್ಯ ಪು ್ಪ ಮಾರುಕಟ್ಟೆ ನಿರ್ಮಿಸಲಾಗುವುದು ಎಂದು, ಕೃಷಿ ಮಾರುಕಟ್ಟೆ ಖಾತೆ ಸಚಿವ, ಶಿವಾನಂದ ಪಾಟೀಲ, ವಿಧಾನಸಭೆ ಪ್ರಶ್ನೋತ್ತರ ಕಲಾಪದಲ್ಲಿ ತಿಳಿಸಿದ್ದಾರೆ.

<><><>

ದೇವರ ಕಾಡುಗಳ ಮೂಲಕ, ಸ್ಥಳೀಯ ಜನ ಸಮುದಾಯಗಳ ಸಹಭಾಗಿತ್ವದಲ್ಲಿ, ಅರಣ್ಯ ಹಾಗೂ ವನ್ಯಜೀವಿ ಸಂಪತ್ತಿನ ಸಂರಕ್ಷಣೆ, ತಾಳಿಕೆ ಮತ್ತು ಬಾಳಿಕೆ ಬರುತ್ತದೆ. ಸ್ಥಳಾಂತರ ಪದ್ಧತಿಯ, ಕುಮರಿ ಕೃಷಿ, ಹಿತ–ಮಿತ ಅರಣ್ಯ ಬಳಕೆಯ, ಅನುಕರಣೀಯ ಮಾದರಿ ಕರ್ನಾಟಕದಲ್ಲಿವೆ, ಎನ್ನುತ್ತಾರೆ, ಬೆಂಗಳೂರಿನ ಭಾರತೀಯ ವಿಜ್ಞಾನ ಸಂಸ್ಥೆಯ, ಪರಿಸರ ವಿಜ್ಞಾನಗಳ ಅಧ್ಯಯನ ಕೇಂದ್ರದ, ಕುಮಟಾ ಕ್ಷೇತ್ರ ಕೇಂದ್ರದ ಹಿರಿಯ ವಿಜ್ಞಾನಿ, ಪ್ರೊಫೆಸರ್ ಎಂ.ಡಿ. ಸುಭಾಷ್ಚಂದ್ರನ್.

<><><>

ಪ್ರೊ. ಎಂ.ಡಿ. ಸುಭಾಷ್ಚಂದ್ರನ್ ಧ್ವನಿ 60 ಸೆಕೆಂದುಗಳು

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

ಆಕಾಶವಾಣಿ ಸುದ್ದಿಗಳಿಗಾಗಿ, ನಮ್ಮ X ಖಾತೆ @airnews_dharwad ಹಾಗೂ

ನಮ್ಮ ಫೇಸ್ಬುಕ್ ಖಾತೆ Airrnu Dharwad ಅನುಸರಿಸಿ.

<><><>

ರಾಜ್ಯದಲ್ಲಿ ಅಕ್ವಾ ಪಾರ್ಕ್‌ಗಳ ನಿರ್ಮಾಣಕ್ಕೆ, ಕ್ರಮ ಕೈಗೊಳ್ಳಲಾಗುವುದು ಎಂದು, ಮೀನುಗಾರಿಕೆ ಖಾತೆ ಸಚಿವ, ಮಂಕಾಳ ವೈದ್ಯ ತಿಳಿಸಿದ್ದಾರೆ. ವಿಧಾನ ಪರಿಷತ್ತಿನಲ್ಲಿ, ಶಾಸಕ ಎಂ.ನಾಗರಾಜು ಅವರ, ಚುಕ್ಕೆ ಗುರುತಿನ ಪ್ರಶ್ನೆಗೆ ಸಚಿವರು, ಉತ್ತರಿಸಿದರು. ಉತ್ತರಕನ್ನಡ ಜಿಲ್ಲೆಯ ಭಟ್ಕಳದಲ್ಲಿ, ಮೀನುಗಾರಿಕೆ ಸಂಶೋಧನಾ ಕೇಂದ್ರ ಹಾಗೂ ಮುರುಡೇಶ್ವರದಲ್ಲಿ, ಸುಸಜ್ಜಿತ ಮೀನುಗಾರಿಕೆ ಹೊರ ಬಂದರು, ಶಿವಮೊಗ್ಗ ಜಿಲ್ಲೆ ಭದ್ರಾವತಿಯಲ್ಲಿ, ಸುಸಜ್ಜಿತ ಮೀನು ಮಾರುಕಟ್ಟೆ, ವಿಜಯಪುರದ ಆಲಮಟ್ಟಿಯಲ್ಲಿ ಒಳನಾಡು ಮೀನುಗಾರಿಕೆ ಕೌಶಲಾಭಿವೃದ್ಧಿ ಕೇಂದ್ರ ಸ್ಥಾಪನೆಗೆ, ಪ್ರಕ್ರಿಯೆ ಆರಂಭವಾಗಿದೆ ಎಂದರು.

<><><>

ದೇಶಾದ್ಯಂತ 2 ಕೋಟಿ 20 ಲಕ್ಷ ಜನ, ಪಡಿತರ ಚೀಟಿಯ ಪ್ರಯೋಜನ ಪಡೆಯುತ್ತಿಲ್ಲ; ಅಂದಾಜು 34 ಲಕ್ಷ 60 ಸಾವಿರ ಚೀಟಿಗಳು ನಕಲಿ ಎಂಬ ಆರೋಪವಿದೆ. ಅರ್ಹರನ್ನು ಪಡಿತರ ಚೀಟಿಗೆ ಸೇರಿಸಿ, ಅನರ್ಹರನ್ನು ಕೈಬಿಡುವಂತೆ, ಎಲ್ಲ ರಾಜ್ಯ ಸರ್ಕಾರಗಳಿಗೆ ನಿರ್ದೇಶಿಸಲಾಗಿದೆ ಎಂದು, ಕೇಂದ್ರ ಆಹಾರ ಮತ್ತು ನಾಗರಿಕ ಪೂರೈಕೆ ಖಾತೆ ಸಚಿವ ಪ್ರಲ್ಹಾದ ಜೋಶಿ, ಸ್ಪಷ್ಟಪಡಿಸಿದ್ದಾರೆ. ಲೋಕಸಭೆಯಲ್ಲಿ ಮಾತನಾಡಿದ ಅವರು, 'ಅಂತ್ಯೋದಯ ಅನ್ನ ಯೋಜನೆ' ಅಡಿ, ಕಳೆದ 2000ದಿಂದ ಆರ್ಥಿಕವಾಗಿ ದುರ್ಬಲರು ಹಾಗೂ ವಿಶೇಷ ಚೇತನರಿಗೆ, ಅತಿ ಕಡಿಮೆ ಬೆಲೆಯಲ್ಲಿ, ತಿಂಗಳಿಗೆ 35 ಕಿಲೋ ಆಹಾರ ಧಾನ್ಯ ನೀಡಲಾಗುತ್ತಿದೆ. ಪ್ರತಿ ಕುಟುಂಬಗಳಿಗೆ 35 ಕಿಲೋ ಪಡಿತರ ವಿತರಿಸಲಾಗುತ್ತಿದೆ ಎಂದರು.

<><><>

ನಾಡಿನಾದಂತ್ಯ ಬಣ್ಣಗಳ ಹಬ್ಬ ಹೋಳಿ ಸಂಭ್ರಮ ಕಳೆಗಟ್ಟಿದೆ. ಕಟ್ಟಿಗೆಯಿಂದ ತಯಾರಿಸಿದ ಕಾಮದೇವ ಹಾಗೂ ರತಿದೇವಿಯರ ಮೂರ್ತಿಗಳನ್ನು ಪ್ರತಿಷ್ಠಾಪಿಸಿ, 3 ದಿನಗಳ ಕಾಲ, ಓಕುಳಿ ವರೆಗೆ ಪೂಜಿಸಲಾಗುತ್ತದೆ. ಐತಿಹಾಸಿಕ ಹಾಗೂ ಧಾರ್ಮಿಕ ಪ್ರಸಿದ್ಧಿ ಪಡೆದಿರುವ, ಇಷ್ಟಾರ್ಥ ಸಿದ್ಧಿಯ ನವಲಗುಂದದ ಕಾಮಣ್ಣ, ಈಗಾಗಲೇ ಪ್ರತಿಷ್ಠಾಪಿಗೊಂಡಿದ್ದು, ಸಾವಿರಾರು ಭಕ್ತಾದಿಗಳು ದರ್ಶನ ಪಡೆದಿದ್ದಾರೆ.

<><><>

ಧಾರವಾಡದ ಮಂಗಳವಾರ ಪೇಟೆಯ ಭೂಸಪೇಟೆಯ, ಅತ್ಯಂತ ಸುಂದರವಾದ ಎತ್ತರದ ಕಾಮಣ್ಣ ಮತ್ತು ರತಿಯರ ಕಾಷ್ಟ ಶಿಲ್ಪ, 155 ವರ್ಷಗಳಿಗಿಂತ ಹಳೆಯದು, ಎನ್ನುತ್ತಾರೆ ಪಂಚ ಕಮೀಟಿ ಅಧ್ಯಕ್ಷ ಈರಣ್ಣ ಆಕಳವಾಡಿ. ಇಂದು ರಾತ್ರಿ ಪ್ರತಿಷ್ಠಾಪಿತಗೊಂಡು, 14ರ ಮಧ್ಯ ರಾತ್ರಿ ವರೆಗೆ ಪೂಜೆಗೊಳ್ಳಲಿರುವ, ಭೂಸಪೇಟೆ ಕಾಮಣ್ಣನ ವೈಶಿಷ್ಟ್ಯದ ಕುರಿತು, ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ, ಧಾರವಾಡದ ಹೆಸರಾಂತ ಸಂಘಟಕ, ಉದಯ ಯಂಡಿಗೇರಿ.

<><><>

ಉದಯ ಯಂಡಿಗೇರಿ ಧ್ವನಿ 45 ಸೆಕೆಂದುಗಳು

<><><>

ಈಗ ಸಂಕ್ಷಿಪ್ತ ಸುದ್ದಿಗಳು:

<><><>

ಜಗದ್ಗುರು ಶ್ರೀ ರೇಣುಕಾಚಾರ್ಯರ ಜಯಂತ್ಯುತ್ಸವ, ನಾಡಿನಾದ್ಯಂತ ಶ್ರದ್ಧಾ, ಭಕ್ತಿಯಿಂದ ಜರುಗಿದವು. ಪೂಜ್ಯರ ಮೌಲ್ಯಾದರ್ಶಗಳ ಬಗ್ಗೆ, ವಿಶೇಷ ಉಪನ್ಯಾಸಗಳು ಜರುಗಿದ ವರದಿಗಳು ಬಂದಿವೆ.

<><><>

ಇಂದು ವಿಶ್ವ ಮೂತ್ರಪಿಂಡ ಆರೋಗ್ಯ ಜಾಗ್ರತಿ ದಿನ. ಈ ವರ್ಷದ ಧ್ಯೇಯವಾಕ್ಯ 'ನಿಮ್ಮ ಕಿಡ್ನಿಗಳು ಸರಿಯಾಗಿವೆಯೇ? ಮೊದಲೇ ಪತ್ತೆ ಮಾಡಿ, ಹಾಗೂ ಮೂತ್ರಪಿಂಡಗಳ ಆರೋಗ್ಯ ರಕ್ಷಿಸಿ.

<><><>

ವಿಶ್ವ ಗ್ಲುಕೊಮಾ ಜಾಗ್ರತಿ ಸಪ್ತಾಹ, ಈ ತಿಂಗಳ 15ರ ವರೆಗೆ, ಜರುಗಲಿದೆ. 'ಗ್ಲುಕೊಮಾ ಮುಕ್ತ ಪ್ರಪಂಚಕ್ಕಾಗಿ ಒಗ್ಗೂಡಿಸುವಿಕೆ' ಧ್ಯೇಯದೊಂದಿಗೆ, ಕಣ್ಣಿನ ಆರೋಗ್ಯ ಕಾಯ್ದುಕೊಳ್ಳಲು, ಆರೋಗ್ಯ ಇಲಾಖೆ ವಿಶೇಷ ಜಾಥಾ ಆಯೋಜಿಸಿದೆ.

<><><>

ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯ ಹಾಗೂ ದಕ್ಷಿಣ ಅಮೆರಿಕದ ಚಿಲಿ ದೇಶದ ವಿಶ್ವವಿದ್ಯಾಲಯದ ಜೊತೆ, ಸಂಶೋಧನಾ ಒಪ್ಪಂದಕ್ಕೆ, ಸಹಿ ಹಾಕಿದೆ.

<><><>

ಮಂಗಳೂರಿನ, ಶಿವರಾಮ ಕಾರಂತ, ಪಿಲಿಕುಳ ನಿಸರ್ಗ ಧಾಮದಲ್ಲಿ, ರಾಣಿ ಹೆಸರಿನ ಹುಲಿ, ಒಂದು ಗಂಡು ಮತ್ತು ಒಂದು ಹೆಣ್ಣು ಮರಿಗೆ ಜನ್ಮ ನೀಡಿದೆ. ಮರಿ ಮತ್ತಿ ತಾಯಿ ಆರೋಗ್ಯದಿಂದಿವೆ ಎಂದು, ಉದ್ಯಾನದ ನಿರ್ದೇಶಕ ಜಯಪ್ರಕಾಶ ಭಂಡಾರಿ ತಿಳಿಸಿದ್ದಾರೆ.

<><><>

ಮೈಸೂರಿನ ಚಾಮರಾಜೇಂದ್ರ ಮೃಗಾಲಯದಲ್ಲಿ, 12 ರಿಂದ 18 ವರ್ಷ ವಯೋಮಿತಿಯ ವಿದ್ಯಾರ್ಥಿಗಳಿಗೆ, ಏಪ್ರಿಲ್‌ನಲ್ಲಿ ಬೇಸಿಗೆ ಶಿಬಿರ ಏರ್ಪಡಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಮೃಗಾಲಯದ ನಿರ್ದೇಶಕರನ್ನು ಸಂಪರ್ಕಿಸಬಹುದು.

<><><>

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:

<><><>

- ಖಾತ್ರಿ ಯೋಜನೆಯ ಅನುಷ್ಠಾನ ಸಮಿತಿಗಳಿಂದ, ಶಾಸಕರ ಘನತೆಗೆ ಕುಂದಿಲ್ಲ – ಮುಖ್ಯಮಂತ್ರಿ ಸಿದ್ದರಾಮಯ್ಯ.
- ಮಹಾತ್ಮ ಗಾಂಧಿ, ನರೇಗಾ ಯೋಜನೆ; 'ಮಹಿಳಾ ಕಾಯಕ ಬಂಧು'ವಿಗಾಗಿ, 'ಸ್ತ್ರೀ ಚೇತನ ಅಭಿಯಾನ' ಆರಂಭ.
- ರಾಜ್ಯದಲ್ಲಿ ಅಕ್ವಾ ಪಾರ್ಕ್‌ಗಳ ನಿರ್ಮಾಣಕ್ಕೆ, ಕ್ರಮ – ಸಚಿವ, ಮಂಕಾಳ ವೈದ್ಯ.
- 2 ಕೋಟಿ 20 ಲಕ್ಷ ಜನ, ಪಡಿತರ ಚೀಟಿಯ ಪ್ರಯೋಜನ ಪಡೆಯುತ್ತಿಲ್ಲ – ಕೇಂದ್ರ ಸಚಿವ ಪ್ರಲ್ಹಾದ ಜೋಶಿ.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಈ ಬೆಳಗ್ಗೆ 7 ಗಂಟೆ 35 ನಿಮಿಷಕ್ಕೆ.**

<><><>